Akashvani : Bangalore
Regional Bulletin In Kannada
26.11.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ, ಸಂವಿಧಾನ ಆತ್ಮ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಮುಡಾ ಪ್ರಕರಣ ; ಡಿಸೆಂಬರ್ ೧೦ ರಂದು ಲೋಕಾಯುಕ್ತ ತನಿಖಾ ವರದಿ ಹೈಕೋರ್ಟ್‌ಗೆ ಸಲ್ಲಿಕೆ
- ಗ್ಯಾರಂಟಿ ಯೋಜನೆ ಕುರಿತ ಹೇಳಿಕೆ ; ಶಾಸಕ ಗವಿಯಪ್ಪಗೆ ಶೋಕಾಸ್ ನೋಟಿಸ್ ನೀಡಲು ಕಾಂಗ್ರೆಸ್ ತೀರ್ಮಾನ
- ಮಂಡ್ಯದಲ್ಲಿ ಭ್ರೂಣಹತ್ಯೆ ಪ್ರಕರಣ ಮರುಕಳಿಸದಂತೆ ಸ್ಕ್ಯಾನಿಂಗ್ ಸೆಂಟರ್‌ಗಳ ಮೇಲೆ ನಿಗಾ ಇಡಲು ಜಿಲ್ಲಾಧಿಕಾರಿ ಸೂಚನೆ
- ಉಪಚುನಾವಣೆ ಸೋಲನ್ನು ಮರೆತು ಮುಂದಿನ ಚುನಾವಣೆಗೆ ಸಜ್ಜಾಗುವಂತೆ ಕಾರ್ಯಕರ್ತರಿಗೆ ಬಿ.ವೈ. ವಿಜಯೇಂದ್ರ ಕರೆ

<><*<><>*><>

ಸಮಾಜದಲ್ಲಿ ಸಾಮಾಜಿಕ, ಆರ್ಥಿಕ ಅಸಮಾನತೆ ಹೋಗಲಾಡಿಸದಿದ್ದರೆ ರಾಜಕೀಯ ಪ್ರಜಾಪ್ರಭುತ್ವ ಯಶಸ್ವಿಯಾಗಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ನಡೆದ ಸಂವಿಧಾನ ದಿನಾಚರಣೆಯಲ್ಲಿ ಮಾತನಾಡಿದ ಅವರು, ಇಡೀ ದೇಶದ ಪಾಲಿಗೆ ಇಂದು ಸಂವಿಧಾನದ ದಿನ. ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಸಂವಿಧಾನದ ಆತ್ಮ ಎಂದು ತಿಳಿಸಿದ್ದಾರೆ. ಬಿಜೆಪಿ ಮನು ಸಂಸ್ಕೃತಿಯಲ್ಲಿ ನಂಬಿಕೆ ಇಟ್ಟುಕೊಂಡಿದೆ. ಕಾಂಗ್ರೆಸ್ ಸಂವಿಧಾನದಲ್ಲಿ ನಂಬಿಕೆ ಇಟ್ಟುಕೊಂಡಿದ್ದು, ಇದುವೇ ಎರಡು ಪಕ್ಷಗಳ ನಡುವಿನ ವತ್ಯಾಸ ಎಂದು ಹೇಳಿದ್ದಾರೆ.

<><*<><>*><>

ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಸಂವಿಧಾನ ದಿನಾಚರಣೆ ಕಾರ್ಯಕ್ರಮ ನಡೆಯಿತು. ಪ್ರಜಾಪ್ರಭುತ್ವದ ಬಗ್ಗೆ ಜಾಗೃತಿ ಮೂಡಿಸಲು ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ವಿರೇಶನಗರದಿಂದ ಬಾಗಲಕೋಟೆ ಜಿಲ್ಲೆಯ ಗಡಿ ಭಾಗದ ಆಲಮಟ್ಟಿಯವರೆಗಿನ ಸುಮಾರು ೬೨ ಕಿಲೋಮೀಟರ್‌ವರೆಗೆ ಹಮ್ಮಿಕೊಂಡ ಮಾನವ ಸರಪಳಿ ನಿರ್ಮಾಣಕ್ಕೆ ಮಾನವ ಸರಪಳಿ ನಾವೀನ್ಯತೆ ವಿಭಾಗದಲ್ಲಿ ವಿಜಯಪುರ ಜಿಲ್ಲೆಗೆ ಪ್ರಥಮ ಸ್ಥಾನ ಲಭಿಸಿದೆ. ಪ್ರಜಾಪ್ರಭುತ್ವ ಕುರಿತು ಜಾಗೃತಿ ಮೂಡಿಸಲು ಕಲಬುರಗಿ ಜಿಲ್ಲೆಯಲ್ಲಿ ಆಯೋಜಿಸಿದ ಮಾನವ ಸರಪಳಿ ನಿರ್ಮಾಣ ಕಾರ್ಯಕ್ರಮವನ್ನು ಅತ್ಯುತ್ತಮ ರೀತಿಯಲ್ಲಿ ನಿರ್ವಹಣೆ ಮಾಡಿದಕ್ಕೆ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮತ್ತು ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರಮಾಣ ಪತ್ರ ಪ್ರದಾನ ಮಾಡಿದರು. ಸಂಶೋಧನಾರ್ಥಿಗಳು ಒಮ್ಮೆ ಸಂವಿಧಾನವನ್ನು ಓದಲೇಬೇಕು ಎಂದು ಸಾಹಿತಿ ಡಾ.ವಡ್ಡಗೆರೆ ನಾಗರಾಜಯ್ಯ ವಿಜಯನಗರ ಹಂಪಿ ವಿಶ್ವವಿದ್ಯಾನಿಲಯದ ಸಂಶೋಧನಾ ವಿದ್ಯಾರ್ಥಿಗಳಿಗೆ ಕರೆ ನೀಡಿದ್ದಾರೆ. ಭಾರತವು ಪ್ರಗತಿ ಪಥದತ್ತ ಸಾಗುವಲ್ಲಿ ಅಂಬೇಡ್ಕರ್ ಅವರ ಕೊಡುಗೆ ಮಹತ್ವದ್ದು ಎಂದು ಕೊಡಗು ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ತಿಳಿಸಿದ್ದಾರೆ. ಭಾರತದ ಸಂವಿಧಾನವು ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಮೌಲ್ಯಗಳನ್ನು ಒತ್ತಿಹೇಳುತ್ತದೆ ಎಂದು ಕೋಲಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಸುನಿಲ್ ಎಸ್ ಹೊಸಮನಿ ಅಭಿಪ್ರಾಯಪಟ್ಟಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಮಿರ್ಜಾನ್ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಯೋಜನಾ ನಿರ್ದೇಶಕ ಕರೀಂ ಅಸದಿ, ಸಂವಿಧಾನ ಶಿಲ್ಪಿ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಗೌರವ ಸಲ್ಲಿಸಿದರು. ನಂತರ ಸಂವಿಧಾನ ಪೀಠಿಕೆ ಬೋಧಿಸುವ ಮೂಲಕ ಅರ್ಥಪೂರ್ಣವಾಗಿ ಸಂವಿಧಾನ ದಿನವನ್ನು ಆಚರಿಸಿದರು.

<><*<><>*><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಭೂಹಗರಣಕ್ಕೆ ಸಂಬಂಧಿಸಿದಂತೆ ದೇವರಾಜು ಮತ್ತು ಸ್ನೇಹಮಹಿ ಕೃಷ್ಣ ಸಲ್ಲಿಸಿದ ಅರ್ಜಿಗಳನ್ನು ವಿಚಾರಣೆಯನ್ನು ಹೈಕೋರ್ಟ್ ಡಿಸೆಂಬರ್‌ಗೆ ಮುಂದೂಡಿದೆ. ಲೋಕಾಯುಕ್ತ ಅಧಿಕಾರಿಗಳು ತನಿಖಾ ವರದಿಯನ್ನು ಡಿಸೆಂಬರ್ ೧೦ಕ್ಕೆ ಸಲ್ಲಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಸಿಬಿಐ ತನಿಖೆಗೆ ಆಗ್ರಹಿಸಿ ಸ್ನೇಹಮಹಿ ಕೃಷ್ಣ ಸಲ್ಲಿಸಿದ ಅರ್ಜಿ ವಿಚಾರಣೆಯು ಡಿಸೆಂಬರ್ ೧೦ ರಂದು ನಡೆಯಲಿದೆ. ಮುಡಾ ಪ್ರಕರಣದ ಕುರಿತಂತೆ ಲೋಕಾಯುಕ್ತ ಅಧಿಕಾರಿಗಳು ಹಾಗೂ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

<><*<><>*><>

ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಚಾರವಾಗಿ ಹೇಳಿಕೆ ನೀಡಿರುವ ಶಾಸಕ ಗವಿಯಪ್ಪ ಅವರಿಗೆ

ಪಕ್ಷದ ವತಿಯಿಂದ ಶೋಕಾಸ್ ನೋಟಿಸ್ ನೀಡಲಾಗುವುದು ಎಂದು ತಿಳಿಸಿದ್ದಾರೆ. ರಾಜ್ಯದ ಜನರಿಗೆ ಗ್ಯಾರಂಟಿ ಕುರಿತಂತೆ ಮಾತು ಕೊಟ್ಟಿದ್ದು, ಯಾವುದೇ ಪರಿಸ್ಥಿತಿಯಲ್ಲೂ ಅದಕ್ಕೆ ಬದ್ಧರಾಗಿದ್ದೇವೆ ಎಂದು ಸ್ಪಷ್ಟಪಡಿಸಿದ್ದಾರೆ. ಅನರ್ಹರು ಇದರ ಲಾಭ ಪಡೆಯುತ್ತಿದ್ದರೆ ಅದನ್ನು ಪರಿಶೀಲಿಸಿ ಸರಿಪಡಿಸಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ಹೆಣ್ಣು ಭ್ರೂಣ ಹತ್ಯೆ ಪ್ರಕರಣಗಳು ಮರುಕಳಿಸದಂತೆ ಸ್ಕ್ಯಾನಿಂಗ್ ಸೆಂಟರ್ ಹಾಗೂ ಮೆಡಿಕಲ್ ಸ್ಟೋರ್ ಗಳ ಮೇಲೆ ತೀವ್ರ ನಿಗಾ ಇಡುವಂತೆ ಜಿಲ್ಲಾಧಿಕಾರಿ ಡಾ. ಕುಮಾರ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ತಂತ್ರ ಕಾಯ್ದೆಯ ಜಿಲ್ಲಾ ಸಲಹಾ ಸಮಿತಿ ಸಭೆ ಹಾಗೂ ಜಿಲ್ಲಾ ತಪಾಸಣಾ ಮೇಲ್ವಿಚಾರಣ ಸಮಿತಿ ಸಭೆ ನಡೆಸಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯಲ್ಲಿ ಭ್ರೂಣಹತ್ಯೆಗೆ ಸಂಬಂಧಿಸಿದಂತೆ ದಾಳಿ ನಡೆಸಿದಾಗ ಸ್ಕಾನಿಂಗ್ ಸೆಂಟರ್‌ಗಳಲ್ಲಿ ಹೆಚ್ಚುವರಿ ಸ್ಕಾನಿಂಗ್ ಯಂತ್ರಗಳು ಇರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ಸ್ಕ್ಯಾನಿಂಗ್ ಸೆಂಟರ್ ಮಾಲೀಕರ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಮಹಾರಾಷ್ಟ್ರದಲ್ಲಿ ಬಿಜೆಪಿ ಗೆಲುವನ್ನು ಸ್ಫೂರ್ತಿಯಾಗಿ ತೆಗೆದುಕೊಂಡು ಕರ್ನಾಟಕದ ಉಪಚುನಾವಣೆ ಸೋಲನ್ನು ಮರೆತುಬಿಡಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಉಪ ಚುನಾವಣೆ ಸೋಲಿನಿಂದ ಭರವಸೆ ಕಳೆದುಕೊಳ್ಳಬೇಡಿ ಎಂದು ತಿಳಿಸಿದ್ದಾರೆ. ಭವಿಷ್ಯದಲ್ಲಿ ಒಂದೇ ಒಂದು ದಿನವನ್ನು ವ್ಯರ್ಥ ಮಾಡದೇ ರಾಜ್ಯದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತರಲು ಪ್ರಯತ್ನಿಸುವಂತೆ ಕರೆ ನೀಡಿದ್ದಾರೆ. ಈ ಉಪಚುನಾವಣೆ ಫಲಿತಾಂಶದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಭ್ರಷ್ಟಾಚಾರವನ್ನು ಮುಚ್ಚಿಡಲು ಸಾಧ್ಯವಿಲ್ಲ ಎಂದು ಹೇಳಿದರು.

<><*<><>*><>

ಖಾದಿ ದೇಶದ ಅಸ್ಮಿತೆಯಾಗಿದ್ದು, ಇದನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಉತ್ತೇಜನ-ಪ್ರೋತ್ಸಾಹ ಅತ್ಯಗತ್ಯವಾಗಿದೆ ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ರಾಜ್ಯಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶದ ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ ಮಹಾತ್ಮ ಗಾಂಧಿ ವಿದೇಶಿ ಉತ್ಪನ್ನಗಳಿಗೆ ಕಡಿವಾಣ ಹಾಕಿ ಖಾದಿ ಉತ್ಪನ್ನಗಳನ್ನು ನೇಯುವ ಮೂಲಕ ಸ್ವದೇಶಿ ಉತ್ಪನ್ನಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು. ದೇಶದ ಅಸ್ಮಿತೆ, ಸ್ವಾವಲಂಬನೆಯ ಪ್ರತೀಕವಾದ ಖಾದಿ ಉಳಿಸಿ ಬೆಳೆಸುವ ಅವಶ್ಯಕತೆ ಇದೆ ಎಂದು ಹೇಳಿದ್ದಾರೆ. ಸರ್ಕಾರದಿಂದ ಯಾದಗಿರಿ ಜಿಲ್ಲೆಯಲ್ಲಿ ೧೫ ದಿನಗಳ ಕಾಲ ರಾಜ್ಯ ಮಟ್ಟದ ಖಾದಿ ಮೇಳವನ್ನು ಆಯೋಜನೆ ಮಾಡಲಾಗಿದ್ದು, ಜನರು ಖಾದಿ ಉತ್ಪನ್ನಗಳನ್ನು ಖರೀದಿಸುವಂತೆ ಮನವಿ ಮಾಡಿದ್ದಾರೆ.

<><*<><>*><>

ಆಹಾರ ಸಚಿವ ಕೆ.ಹೆಚ್ ಮುನಿಯಪ್ಪ ಇಂದು ಕೇಂದ್ರದ ಕಾರ್ಮಿಕ ಹಾಗೂ ಉದ್ಯೋಗ ಸಚಿವೆ ಶೋಭಾ ಕರಂದ್ಲಾಜೆ ಅವರನ್ನು ನವದೆಹಲಿಯಲ್ಲಿ ಭೇಟಿ ಮಾಡಿದ್ದಾರೆ. ಕೋಲಾರ ಜಿಲ್ಲೆಯ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಕೌಶಲ್ಯ ಆಧಾರಿತ ಉದ್ಯೋಗ ತರಬೇತಿ ಕೇಂದ್ರವನ್ನು ಸ್ಥಾಪಿಸಲು ಅನುದಾನ ಮಂಜೂರು ಮಾಡುವಂತೆ ಮನವಿ ಮಾಡಿದ್ದಾರೆ. ಈ ಯೋಜನೆಯು ನುರಿತ ಮತ್ತು ಕೌಶಲ್ಯರಹಿತ ಯುವಕರಿಗೆ ಬೇಡಿಕೆ ಆಧಾರಿತ ಕೌಶಲ್ಯ ತರಬೇತಿಯನ್ನು ಒದಗಿಸುವ ಗುರಿ ಹೊಂದಿದೆ, ಇದರಿಂದಾಗಿ ವಿವಿಧ ಕೈಗಾರಿಕಾ ವಲಯಗಳಲ್ಲಿ ಅವರ ಉದ್ಯೋಗಾವಕಾಶವನ್ನು ಹೆಚ್ಚಿಸಲಿದೆ. ಉದ್ಯೋಗ ತರಬೇತಿ ಕೇಂದ್ರ ಸ್ಥಾಪನೆಗೆ ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿದ್ದು, ಶೀಘ್ರದಲ್ಲೇ ನಿರ್ಮಾಣ ಕಾರ್ಯ ಪ್ರಾರಂಭವಾಗಲಿದೆ ಎಂದರು.

<><*<><>*><>

ಖಾನಾಪೂರ ತಾಲೂಕಿನ ನಂದಗಡದಲ್ಲಿ ನಿರ್ಮಾಣಗೊಳ್ಳುತ್ತಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಮ್ಯೂಸಿಯಂ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಲೋಕಾರ್ಪಣೆಗೆ ಸಿದ್ಧಗೊಳಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ. ಕಾಮಗಾರಿ ಕುರಿತು ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆ ಹಾಗೂ ನಂದಗಡ ಮ್ಯೂಸಿಯಂ ಸೇರಿ ಒಟ್ಟು ೨೬೧ ಕೋಟಿ ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ೪೯ ಕೋಟಿ ವೆಚ್ಚದಲ್ಲಿ ಒಟ್ಟು ೧೩ ಎಕರೆ ಪ್ರದೇಶದಲ್ಲಿ ನಂದಗಡ ಮ್ಯೂಸಿಯಂ ನಿರ್ಮಾಣ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿ ಡಿಸೆಂಬರ್ ಅಂತ್ಯದೊಳಗೆ ಮ್ಯೂಸಿಯಂ ಉದ್ಘಾಟನೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಸಭೆಯ ಬಳಿಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಮಾಧಿ ಸ್ಥಳ ಮತ್ತು ರಾಯಣ್ಣ ಕೆರೆಯಲ್ಲಿ ಪ್ರತಿಮೆ ಸ್ಥಾಪನೆ ಕುರಿತು ಸ್ಥಳ ಪರಿಶೀಲನೆ ನಡೆಸಿದರು.

<><*<><>*><>

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ ಹಾಗೂ ರಾಗಿ ಖರೀದಿಸಲು ಡಿಸೆಂಬರ್ ೧ ರಿಂದ ೩೧ ರವರೆಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ರಾಮನಗರ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ತಿಳಿಸಿದ್ದಾರೆ. ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿ ಕ್ವಿಂಟಾಲ್‌ಗೆ ರಾಗಿಗೆ ೪ ಸಾವಿರದ ೨೯೦ ರೂಪಾಯಿ, ಪ್ರತಿ ಕ್ವಿಂಟಾಲ್ ಸಾಮಾನ್ಯ ಭತ್ತಕ್ಕೆ ೨ ಸಾವಿರದ ೩೦೦ ರೂಪಾಯಿ ಹಾಗೂ ಗ್ರೇಡ್-ಎ ಭತ್ತಕ್ಕೆ ಪ್ರತಿ ಕ್ವಿಂಟಾಲ್‌ಗೆ ೨ ಸಾವಿರದ ೩೨೦ ರೂಪಾಯಿ ಸರ್ಕಾರ ನಿಗದಿಪಡಿಸಿದೆ ಎಂದು ಹೇಳಿದ್ದಾರೆ. ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಖರೀದಿ ಏಜೆನ್ಸಿಯಾಗಿರಲಿದೆ. ಈ ಬಾರಿ ಹಾರೋಹಳ್ಳಿ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿಯೂ ನೋಂದಣಿ ಕೇಂದ್ರಗಳನ್ನು ತೆರೆಯಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ನೋಂದಾಯಿತ ರೈತರಿಂದ ೨೦೨೪ರ ಜನವರಿ ೧ ರಿಂದ ಮಾರ್ಚ್ ೩೧ರ ವರೆಗೆ ಆಹಾರಧಾನ್ಯ ಖರೀದಿಸಲಾಗುವುದು ಎಂದು ವಿವರಿಸಿದ್ದಾರೆ.

<><*<><>*><>

ನವದೆಹಲಿಯ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಪಬ್ಲಿಕ್ ಅಡ್ಮಿನಿಸ್ಟ್ರೇಷನ್ ನ  ಡಾ. ಗಾಡಧರ್ ಮಹಾಪತ್ರ ತಂಡವು ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಭೇಟಿ ನೀಡಿ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಯೋಜನೆಗಳ ಬಗ್ಗೆ ಮಾಹಿತಿ ಕಲೆಹಾಕಿತು. ೧೪ ಹಿರಿಯ ಅಧಿಕಾರಿಗಳ ತಂಡ ಗ್ರಾಮೀಣ ಶೈಕ್ಷಣಿಕ ಭೇಟಿಯಲ್ಲಿ ಜಿಲ್ಲೆಯಲ್ಲಿ ಅನುಷ್ಠಾನವಿರುವ ಗ್ರಾಮೀಣಾಭಿವೃದ್ಧಿ ಯೋಜನೆಗಳ ಬಗ್ಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಕೆ.ಎನ್ ಅನುರಾಧ ಅವರಿಂದ ಮಾಹಿತಿ ಪಡೆದರು. ಮಹಾತ್ಮ ಗಾಂಧಿ ನರೇಗಾ ಯೋಜನೆ, ಜಲ ಜೀವನ್ ಮಿಷನ್, ೧೫ನೇ ಹಣಕಾಸು, ಸ್ವಚ್ಛ ಭಾರತ್ ಮಿಷನ್, ಎನ್ ಆರ್ ಎಲ್ ಎಮ್ ಯೋಜನೆ, ಕೂಸಿನ ಮನೆ, ಗ್ರಂಥಾಲಯ, ವಸತಿ ಯೋಜನೆಗಳು, ಅಟಲ್ ಭೂ ಜಲ್ ಯೋಜನೆ ಹಾಗೂ ಇತರೆ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿರುವ ಕುರಿತಂತೆ ಪರಿಶೀಲನೆ ನಡೆಸಿದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಗಣಿತ ಕಲಿಕಾ ಆಂದೋಲನದ ಮೂಲಕ ಗ್ರಾಮ ಮಟ್ಟದ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟವನ್ನು ಸುಧಾರಿಸಬೇಕು ಎಂದು ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ  ಅಧಿಕಾರಿ ಭರತ್ .ಎಸ್ ತಿಳಿಸಿದ್ದಾರೆ.

೨. ಲಿಂಗತ್ವ ಅಲ್ಪಸಂಖ್ಯಾತರನ್ನು ಸಮಾಜ ತಾತ್ಸಾರ ಮನೋಭಾವನೆಯಿಂದ ಕಾಣುವುದನ್ನು ಬಿಟ್ಟು, ಅವರೂ ಗೌರವಯುತವಾಗಿ ಬದುಕಲು ಅವಕಾಶ ಮಾಡಿಕೊಡಬೇಕು ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ಈಶಾನ್ಯ ಮುಂಗಾರು ದುರ್ಬಲವಾಗಿತ್ತು. ರಾಜ್ಯದಲ್ಲಿ ಗರಿಷ್ಠ ತಾಪಮಾನ ೩೬.೪ ಡಿಗ್ರಿ ಸೆಲ್ಸಿಯೆಸ್, ಕಾರವಾರದಲ್ಲಿ ಹಾಗೂ ಕನಿಷ್ಠ ತಾಪಮಾನ ೧೨.೨ ಡಿಗ್ರಿ ಸೆಲ್ಸಿಯೆಸ್ ಬೀದರ್‌ನಲ್ಲಿ ದಾಖಲಾಗಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ <>*><>